# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 209 (207) |
| 2. ಸದಸ್ಯರ ಹೆಸರು | : | ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) |
| 3. ಉತ್ತರಿಸಬೇಕಾದ ದಿನಾಂಕ | : | 12.08.2025 |
| 4.ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನ ಸಮೀಪ ಎರಡನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸರ್ವೆ ಮಾಡಲಾಗಿದೆಯೇ; ಮಾಡಿದ್ದರೆ ಯಾವ ಸ್ಥಳ ನಿಗದಿಪಡಿಸಲಾಗಿದೆ; | ಬೆಂಗಳೂರಿನಲ್ಲಿ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಅಭಿವೃದ್ಧಿಗೆ 3 ಸ್ಥಳಗಳನ್ನು ಗುರುತಿಸಲಾಗಿದ್ದು, ಈ ಸ್ಥಳಗಳಿಗೆ ಸರ್ಕಾರದಿಂದ ಯಾವುದೇ ಸರ್ವೆ ಕಾರ್ಯ ಕೈಗೊಂಡಿರುವುದಿಲ್ಲ. AAI ಸಂಸ್ಥೆಯು ಸ್ಥಳಗಳ ಪರಿಶೀಲನೆ ನಡೆಸಿದ್ದು, ಸದರಿ ಕಾರ್ಯಸಾಧ್ಯತಾ ವರದಿಯನ್ನು ಶೀಘ್ರದಲ್ಲಿ ಸಲ್ಲಿಸುವ ನಿರೀಕ್ಷೆಯಿದೆ. |
| (ಆ) | ವಿಮಾನ ನಿಲ್ದಾಣ ನಿರ್ಮಾಣಕ್ಕೆ ಎಷ್ಟು ಎಕರೆ ಭೂಮಿ ಅವಶ್ಯಕತೆಯಿದೆ; ಸರ್ಕಾರ ನಿಗದಿಪಡಿಸಿರುವ ಪ್ರದೇಶದಲ್ಲಿ ಎಷ್ಟು ಎಕರೆ ಸರ್ಕಾರಿ ಭೂಮಿ ಇದೆ; ಖಾಸಗಿ ಭೂಮಿ ಸ್ವಾಧೀನಪಡಿಸಿಕೊಳ್ಳುವ ಅವಶ್ಯಕತೆ ಇದೆಯೇ; (ವಿವರ ನೀಡುವುದು) | ಬೆಂಗಳೂರು 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸುಮಾರು 4500 ಎಕರೆ ಜಮೀನಿನ ಅವಶ್ಯಕತೆ ಇರುವುದಾಗಿ ಅಂದಾಜಿಸಿದೆ. ಆದರೆ ವಿಮಾನ ನಿಲ್ದಾಣಕ್ಕೆ ಗುರುತಿಸಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಜಮೀನುಗಳ ಭೂಸ್ವಾಧೀನ ಸರ್ವೆ ಕಾರ್ಯವನ್ನು ಕೈಗೊಂಡಿರುವುದಿಲ್ಲ. ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಂಡ ನಂತರದಲ್ಲಿ ಖಾಸಗಿ ಮತ್ತು ಸರ್ಕಾರಿ ಜಮೀನುಗಳ ವಿವರಗಳು ಲಭ್ಯವಾಗುತ್ತದೆ. |
| (ಇ) | ಎರಡನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಅಗತ್ಯವಿರುವ ಹಣ ಎಷ್ಟು; ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ; ಕೇಂದ್ರ ಸರ್ಕಾರ ಯೋಜನೆಗೆ ಅನುಮೋದನೆ ನೀಡಿದೆಯೇ; ಹಾಗೂ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಕ್ರಿಯೆ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಬೆಂಗಳೂರು ನಗರಕ್ಕೆ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಅಭಿವೃದ್ಧಿಪಡಿಸಲು 3 ಸ್ಥಳಗಳನ್ನು ಅಂತಿಮಗೊಳಿಸಿದ್ದು ಸದರಿ ಸ್ಥಳಗಳಿಗೆ ಭಾರತ ಸರ್ಕಾರದ ನಾಗರೀಕ ವಿಮಾನ ಸಚಿವಾಲಯದ Steering Committee ಯಿಂದ Site Clearances ಅನ್ನು ಪಡೆಯಲು ಅರ್ಜಿಗಳನ್ನು ದಿನಾಂಕ:05.03.2025 ರಂದು ಸಲ್ಲಿಸಿದೆ. ಕೇಂದ್ರ ಸರ್ಕಾರದ AAI ಸಂಸ್ಥೆಯು ದಿನಾಂಕ:07.04.2025 ರಂದು ಪರಿವೀಕ್ಷಣೆ ಕೈಗೊಂಡಿದ್ದು ಪೂರ್ವ ಕಾರ್ಯಸಾಧ್ಯತಾ ವರದಿಯನ್ನು ಸಿದ್ದಪಡಿಸಿ ರಾಜ್ಯ ಸರ್ಕಾರಕ್ಕೆ ಸಲ್ಲಿಸುವ ನಿರೀಕ್ಷೆಯಿದೆ. |

ಸಂಖ್ಯೆ: ಮೂಅಇ 168 ರಾಅವಿ 2025

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು